# ಕರ್ನಾಟಕ ವಿಧಾನ ಪರಿಷತ್ತು
## ನೂರ ಮೂವತ್ತನೆಯ ಅಧಿವೇಶನ
## (ಮುಂದುವರೆದ ಉಪವೇಶನಗಳು)
## <u>ಕಾರ್ಯಕಲಾಪಗಳ ಪಟ್ಟಿ</u>
## ಶುಕ್ರವಾರ, ದಿನಾಂಕ: 15ನೇ ಜುಲೈ, 2016
## (ಸಮಯ: ಬೆಳಗ್ಗೆ: 11.00 ಗಂಟೆಗೆ)

******

### 01. ನಿಯಮ 68ರಡಿಯಲ್ಲಿ ಸಾರ್ವಜನಿಕ ಮಹತ್ವದ ಜರೂರು ವಿಷಯದ ಮೇಲಿನ ಚರ್ಚೆಗೆ ಸರ್ಕಾರದಿಂದ ಉತ್ತರ

**ಶ್ರೀಯುತರುಗಳಾದ: ಕೆ.ಎಸ್. ಈಶ್ವರಪ್ಪ, ಮಾನ್ಯ ವಿರೋಧ ಪಕ್ಷದ ನಾಯಕರು, ಕ್ಯಾಪ್ಟನ್ ಗಣೇಶ್ ಕಾರ್ಣಿಕ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಮಾನ್ಯ ಸದಸ್ಯರುಗಳಾದ: ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಬಸವರಾಜ ಹೊರಟ್ಟಿ, ಟಿ.ಎ. ಶರವಣ ಹಾಗೂ ಇತರರುಗಳು** ರಾಜ್ಯದಲ್ಲಿ ಆಡಳಿತ ವ್ಯವಸ್ಥೆ ಮತ್ತು ಪೋಲೀಸ್ ವ್ಯವಸ್ಥೆ ಕುಸಿದಿದ್ದು, ಪ್ರಾಮಾಣಿಕ ಅಧಿಕಾರಿಗಳಿಗೆ ರಕ್ಷಣೆ ಇಲ್ಲದೆ ಆತ್ಮಹತ್ಯೆ ಮಾಡಿಕೊಳ್ಳುತ್ತಿರುವ ಹಾಗೂ ಸ್ವಯಂ ನಿವೃತ್ತಿಯಾಗುತ್ತಿರುವ ಪರಿಸ್ಥಿತಿ ಬಗ್ಗೆ ನಡೆದ ಚರ್ಚೆಯ ಮೇಲೆ ಸರ್ಕಾರದಿಂದ ಉತ್ತರ.

### 02. ಪ್ರಶ್ನೋತ್ತರ

| | |
|---|---|
| ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : ಇಪ್ಪತ್ತೊಂದನೆಯ ಪಟ್ಟಿ |
| ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : ಇಪ್ಪತ್ತೊಂದನೆಯ ಪಟ್ಟಿ |

### 03. ವರದಿಗಳನ್ನೊಪ್ಪಿಸುವುದು

**ಅ) ಶ್ರೀ ಮರಿತಿಬ್ಬೇಗೌಡ (ಮಾನ್ಯ ಉಪಸಭಾಪತಿಗಳು ಹಾಗೂ ಅಧ್ಯಕ್ಷರು, ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿ)** ಅವರು ಸದಸ್ಯರುಗಳ ಖಾಸಗಿ ವಿಧೇಯಕಗಳ ಮತ್ತು ನಿರ್ಣಯಗಳ ಸಮಿತಿಯ ಮೂರನೆಯ ವರದಿಯನ್ನು ಒಪ್ಪಿಸುವುದು.

**ಆ) ಶ್ರೀ ಎಸ್.ವ್ಹಿ.ಸಂಕನೂರ, (ಸದಸ್ಯರು, ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)** ಅವರು 2015-16ನೇ ಸಾಲಿನ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಮೂವತ್ತೊಂದನೆಯ ವರದಿಯನ್ನು ಒಪ್ಪಿಸುವುದು.

..2

## 04. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ಉಡುಪಿ ಮತ್ತು ಕುಂದಾಪುರ ತಾಲ್ಲೂಕುಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ವರಾಹಿ ನೀರಾವರಿ ಯೋಜನೆಯ ಕಾಲುವೆಯನ್ನು ಉಡುಪಿ ತಾಲ್ಲೂಕಿನ ಹೆಜಮಾಡಿಯವರೆಗೂ ಮುಂದುವರೆಸಿ, ಕೆರೆಗಳನ್ನು ತುಂಬಿಸುವ ಯೋಜನೆ ಬಗ್ಗೆ **ಮಾನ್ಯ ಭಾರೀ ಮತ್ತು ಮಧ್ಯಮ ನೀರಾವರಿ ಸಚಿವರ** ಗಮನ ಸೆಳೆಯುವುದು.

**ಆ) ಶ್ರೀ ಐವನ್ ಡಿ'ಸೋಜಾ (ಸರ್ಕಾರಿ ಮುಖ್ಯ ಸಚೇತಕರು)** ಅವರು ಅಂತರ್ಜಲ ಕುಸಿತದಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀರಿನ ಅಭಾವ ಉಂಟಾಗಿರುವುದರಿಂದ ಅಂತರ್ಜಲ ವೃದ್ಧಿಸಲು ಇಲಾಖೆಯ ಮುಂದಿರುವ ಯೋಜನೆಗಳ ಬಗ್ಗೆ **ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಸಣ್ಣ ನೀರಾವರಿ ಸಚಿವರ** ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

**ಅ) ಶ್ರೀ ರಾಮಚಂದ್ರಗೌಡ** ಅವರು ಬೆಂಗಳೂರು ನಗರದ ಕೆಲವು ಕೆರೆಗಳಲ್ಲಿ ವಿಷಯುಕ್ತ ಹಾಗೂ ಹಾನಿಕಾರಕವಾದ ನೊರೆ ಸಮಸ್ಯೆಯಿಂದಾಗಿ ಲಕ್ಷಾಂತರ ಮೀನುಗಳು ಸಾವನ್ನಪ್ಪಿದ್ದು ಹಾಗೂ ಕೆರೆಗಳ ಸುತ್ತಮುತ್ತಲಿನ ಸಾರ್ವಜನಿಕರ ಆರೋಗ್ಯಕ್ಕೆ ದುಷ್ಪರಿಣಾಮವುಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು)**

**ಆ) ಶ್ರೀ ಪುಟ್ಟಣ್ಣ** ಅವರು ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ 1993-94 ಮತ್ತು 1994-95ರಲ್ಲಿ ಸೇವೆ ಸಲ್ಲಿಸಿ, ಶೇ 55% ಕ್ಕಿಂತ ಕಡಿಮೆ ಅಂಕ ಪಡೆದ ಅರೆಕಾಲಿಕ ಉಪನ್ಯಾಸಕರಗಳ ಸೇವಾ ಸಕ್ರಮಾತಿ ಮಾಡುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರು)**

## 06. ಖಾಸಗಿ ಸದಸ್ಯರ ಕಾರ್ಯಕಲಾಪಗಳು

### ಖಾಸಗಿ ವಿಧೇಯಕ

**ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕ, 2015:-**

ಅ) **ಶ್ರೀ ಬಸವರಾಜ ಹೊರಟ್ಟಿ** ಅವರು 2015ನೇ ಸಾಲಿನ ಕರ್ನಾಟಕ ಶಿಕ್ಷಣ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

**ಶ್ರೀನಿವಾಸ**
**ಕಾರ್ಯದರ್ಶಿ(ಪ್ರ)**

---